ಮಲೆನಾಡು ಅಭಿವೃದ್ಧಿ ಮಂಡಳಿಯಿಂದ ಕಾಮಗಾರಿಗಳಿಗೆ ಹಣ ಬಿಡುಗಡೆ

1966(2213) - ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ) : ಮಾನ್ಯ ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ ವತಿಯಿಂದ ಮುಗಿದ ಕಾಮಗಾರಿಗಳಿಗೆ ನೀಡಬೇಕಾದ ಬಾಕಿ ಹಣ ಎಷ್ಟು?

ಆ) ಎಷ್ಟು ವರ್ಷದಿಂದ ಬಾಕಿ ಇದೆ ಹಣ ಪಾವತಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಸಚಿವರು):

ಅ) 10.67 ಕೋಟಿ ರೂ.ಗಳು

ಆ) 2 ವರ್ಷದಿಂದ ಬಾಕಿ ಇದೆ. ಸಂಪನ್ಮೂಲಗಳನ್ನಾಧರಿಸಿ, ಹಣ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು.

ಗುಂಡ್ಲುಪೇಟೆ ಕ್ಷೇತ್ರದಲ್ಲಿ ಸಿ.ಆರ್.ಎಫ್ ನಿಧಿಯಿಂದ ರಸ್ತೆ ಅಭಿವೃದ್ಧಿ

1967(2219) - ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗುಂಡ್ಲುಪೇಟೆ ಮತ ಕ್ಷೇತ್ರದಲ್ಲಿ CRF ನಿಧಿಯಿಂದ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುತ್ತಿದೆಯೇ;

ಆ) ಈವರೆಗೆ ಕ್ಷೇತ್ರದಲ್ಲಿ ಕೈಗೊಂಡಿರುವ ಕಾಮಗಾರಿಗಳಾವುವು; ಕೈಗೊಳ್ಳದಿದ್ದರೆ ಕಾರಣಗಳೇನು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಹೌದು.

ಆ) ದಿನಾಂಕ 2.12.2002 ರಲ್ಲಿ ಕೇಂದ್ರ ಸಾರಿಗೆ ಸಚಿವಾಲಯದವರು ಗುಂಡ್ಲುಪೇಟೆಯಿಂದ ಚಾಮರಾಜನಗರ ಜಿಲ್ಲಾ ಮುಖ್ಯ ರಸ್ತೆಯ ಆಯ್ದ ಭಾಗಗಳನ್ನು ಅಭಿವೃದ್ಧಿಪಡಿಸಲು ರೂ. 50.00 ಲಕ್ಷಗಳ ಕಾಮಗಾರಿಗೆ ಅನುಮೋದನೆಯನ್ನು ನೀಡಿರುತ್ತಾರೆ. ಅಭಿವೃದ್ಧಿ ಕಾಮಗಾರಿಯನ್ನು ಈ ಕೂಡಲೇ ಕೈಗೊಳ್ಳಲಾಗುವುದು.

ಚಿಕ್ಕಮಗಳೂರು ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಗೆ ಒಳಪಟ್ಟಿರುವ ಅಭಿವೃದ್ಧಿ ಕಾರ್ಯ

1968(2181) - ಶ್ರೀ ಮಲ್ಲಿಕಾರ್ಜುನ ಕೆ.ಬಿ (ಬೀರೂರು) : ಮಾನ್ಯ ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆ ಕೆಮ್ಮಣ್ಣುಗುಂಡಿಯನ್ನು ಪ್ರವಾಸೋದ್ಯಮ ಇಲಾಖೆಗೆ ತೆಗೆದುಕೊಳ್ಳಲು ತೀರ್ಮಾನಿಸಲಾಗಿದೆಯೇ?

ಆ) ಹಾಗಿದ್ದಲ್ಲಿ, ಈ ಪ್ರದೇಶವನ್ನು ಅಭಿವೃದ್ಧಿಪಡಿಸಲು ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ?

ಇ) ಸದರಿ ಸ್ಥಳದಲ್ಲಿ ಈಗಾಗಲೇ ತೋಟಗಾರಿಕೆ ಇಲಾಖೆಯವರು ಅಭಿವೃದ್ಧಿಪಡಿಸಿರುವ ಸ್ಥಳವನ್ನು ಏನು ಮಾಡಲಾಗುವುದು?

ಈ) ಅಭಿವೃದ್ಧಿಪಡಿಸಿರುವ ತೋಟಗಾರಿಕೆ ತಮ್ಮ ಇಲಾಖೆ ತೆಗೆದುಕೊಂಡಿದ್ದರೆ ಅಧ್ಯಯನಕ್ಕೆ ಬರುವ ಸಸ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿಗಳಿಗೆ ತೊಂದರೆಯಾಗುವುದಿಲ್ಲವೆ? ಹಾಗಿದ್ದಲ್ಲಿ, ಇದಕ್ಕೆ ಪರಿಹಾರ ಏನು?

ಶ್ರೀ ಡಿ.ಬಿ. ಇನಾಂದಾರ್ (ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು) :

ಅ) ಕಿಮ್ಮಣ್ಣುಗುಂಡಿ ಅಭಿವೃದ್ಧಿಯನ್ನು ಪರಿಣಾಮಕಾರಿ ಹಾಗೂ ಉತ್ತಮವಾಗಿ ನಿರ್ವಹಿಸಲು ಪ್ರವಾಸೋದ್ಯಮ ಇಲಾಖೆಗೆ ವಹಿಸಲಾಗಿದೆ.

ಆ) ಇದರ ಬಗ್ಗೆ ವಿವರವಾದ ಯೋಜನಾ ವರದಿ ತಯಾರಿಸಲಾಗುತ್ತಿದೆ.

ಇ) ಸದ್ಯಕ್ಕೆ ತೋಟಗಾರಿಕೆ ಇಲಾಖೆಯೇ ನಿರ್ವಹಿಸುವುದು.

ಈ) ಇಲ್ಲ

ಅರಣ್ಯ ಭೂಮಿ ಅತಿಕ್ರಮಣದಾರರನ್ನು ಒಕ್ಕಲೆಬ್ಬಿಸುವುದು

1969 (2449) - ಶ್ರೀ ಮೋಹನ ಕೆ. ಶೆಟ್ಟಿ (ಕುಮಟ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಶೇಕಡಾ 80 ರಷ್ಟು ಭೂ ಪ್ರದೇಶವು ಅರಣ್ಯವಾಗಿದ್ದು ಕೃಷಿ ಭೂಮಿ ಅತ್ಯಂತ ಕಡಿಮೆಯಿದ್ದು, ಸಣ್ಣ, ಅತಿ ಸಣ್ಣ ರೈತರು, ಭೂಹೀನ ಕೃಷಿ ಕಾರ್ಮಿಕರೇ ಹೆಚ್ಚಿನ ಸಂಖ್ಯೆಯಲ್ಲಿದ್ದು, ಇಲ್ಲಿ 1978ರ ಪೂರ್ವ ಮತ್ತು ನಂತರ ಅರಣ್ಯ ಭೂಮಿ ಅತಿಕ್ರಮ ಮಾಡಿ ವಾಸವಿದ್ದು ಉಪ ಜೀವನ ನಡೆಸುತ್ತಿರುವವರನ್ನು ಒಕ್ಕಲೆಬ್ಬಿಸುವ ಬಗ್ಗೆ ಕ್ರಮ ಕೈಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ, ಮಾನವೀಯತೆ ಆಧಾರದ ಮೇಲೆ ತೆರವು ಮಾಡದಂತೆ ಸರ್ಕಾರ ಕ್ರಮ ಕೈಗೊಳ್ಳುವುದೆ?

ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ದಿನಾಂಕ 27-4-1978 ಕ್ಕಿಂತ ಪೂರ್ವದಿಂದಲೂ ರಾಜ್ಯದ ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡಿಕೊಂಡು ಬಂದಿರುವ ಪ್ರಕರಣಗಳನ್ನು ಸಕ್ರಮಗೊಳಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಈ ಬಗ್ಗೆ ಕೇಂದ್ರ ಸರ್ಕಾರವು ಹಲವು ಷರತ್ತುಗಳನ್ನು ವಿಧಿಸಿ 14848.83 ಹೆ. ಅರಣ್ಯ ಒತ್ತುವರಿ ಪ್ರದೇಶವನ್ನು ಸಕ್ರಮಗೊಳಿಸಲು ಅನುಮೋದನೆ ನೀಡಿರುತ್ತದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ದಿನಾಂಕ 5-5-1997ರ ಆದೇಶದಲ್ಲಿ ದಿನಾಂಕ 27-4-1978 ಕ್ಕಿಂತ ಪೂರ್ವದ ಅರ್ಹ ಪ್ರಕರಣಗಳನ್ನು ಸಕ್ರಮಗೊಳಿಸಲು ಹಾಗೂ ಅನರ್ಹ ಮತ್ತು ದಿನಾಂಕ 27-4-1978 ರಂದು ಮತ್ತು ಆ ನಂತರದ ಎಲ್ಲಾ ಅತಿಕ್ರಮಣಗಳನ್ನು ಕರ್ನಾಟಕ ಅರಣ್ಯ ಕಾಯ್ದೆ 1963 ಕಲಂ 64(A) ಪ್ರಕಾರ ಖುಲ್ಲಾ ಪಡಿಸಲು ಆದೇಶ ನೀಡಿರುತ್ತದೆ. ಸದರಿ ಸರ್ಕಾರಿ ಆದೇಶದ ಪ್ರಕಾರ ಅನರ್ಹ ಪ್ರಕರಣಗಳನ್ನು ಖುಲ್ಲಾಪಡಿಸಲಾಗುತ್ತಿದೆ.